ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾದಂ. ಯವರ ನ್ಯಾಯಾಲಯ, ಚಾಮರಾಜನಗರ .

ಸಿಸಿ. 1806/2022

| | | | |
|---|---|---|---|
| ಸಾಕ್ಷಿದಾರರು ಹೆಸರು | : | ಸಂತೋಷ್ | ದಿನಾಂಕಃ 20.05.2026 ರಂದು ಸಾಕ್ಷಿಯನ್ನು ಕರೆಸಿ ಪ್ರಮಾಣವಚನ ಬೋಧಿಸಲಾಯಿತು. |
| ತಂದೆಯ ಹೆಸರು | : | ಜಯರಾಂ | |
| ವಯಸ್ಸು | : | 47 ವರ್ಷ | |
| ಉದ್ಯೋಗ | : | ವ್ಯವಸಾಯ | **CW-4** |
| ವಾಸಸ್ಥಳ | : | ಪಣ್ಯದಹುಂಡಿ ಗ್ರಾಮ. | **PW-9** |

ಮುಖ್ಯ ವಿಚಾರಣೆ : ಮಾನ್ಯ ಎಪಿಪಿರವರಿಂದಃ

ಆರೋಪಿ ನಮ್ಮ ಊರಿನವರು. ಚಾಸಾ5 ನನಗೆ ಪರಿಚಯ. ಚಾಸಾ 1 ರಿಂದ 3ರವರು ಪರಿಚಯ ಇರುತ್ತಾರೆ. ಈ ಪ್ರಕರಣದ ಕುರಿತು ನನಗೆ ಯಾವುದೇ ಮಾಹಿತಿ ಇಲ್ಲ. ಪೋಲೀಸರ ಮುಂದೆ ಯಾವುದೇ ಹೇಳಿಕೆ ನೀಡಿರುವುದಿಲ್ಲ.

( ಮಾನ್ಯ ಎಪಿಪಿರವರ ಕೋರಿಕೆ ಮೇರೆಗೆ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯನ್ನಾಗಿ ಪರಿಗಣಿಸಿ ಪಾಟೀಸವಾಲಿಗೆ ಅನುಮತಿ ನೀಡಲಾಯಿತು.)

ಪಾಟೀಸವಾಲುಃ ಮಾನ್ಯ ಎಪಿಪಿರವರಿಂದಃ

ದಿನಾಂಕಃ 16.03.2023 ರಂದು ಚಾಸಾ 1 ಮತ್ತು 2 ರವರ ಮನೆಯಲ್ಲಿ ಇದ್ದಾಗ ಬೆಳಿಗ್ಗೆ 8.30 ರ ಸಮಯದಲ್ಲಿ ಆರೋಪಿತರು ಅಲ್ಲಿಗೆ ಬಂದು ಅವರಿಗೆ ಅವಾಚ್ಯವಾಗಿ ಬೈಯುತ್ತಿದ್ದು ಅವರು ಏಕೆ ಬೈಯುತ್ತಿದ್ದೀರಿ ಎಂದು ಕೇಳಿದಾಗ ಆರೋಪಿತರು ಚಾಸಾ2 ರವರನ್ನು ಅಡ್ಡಗಟ್ಟಿ ಕೈಯಿಂದ ಮೈಕೈಗೆ ಹೊಡೆದಿರುತ್ತಾರೆ ಎಂದರೆ ಸರಿಯಲ್ಲ. ಆಗ ಬಿಡಿಸಲು ಬಂದ ಚಾಸಾ 1 ರವರಿಗೆ 1ನೇ ಆರೋಪಿ ಚಾಸಾ 1 ರವರ ಸೀರೆ ಸೆರುಗು ಹಿಡಿದು ಎಳೆದಾಡಿ ಕೆಳಗೆ ಬಿಳಿಸಿರುತ್ತಾನೆ ಎಂದರೆ ಸರಿಯಲ್ಲ. ನಂತರ ಆರೋಪಿತರು ಚಾಸಾ 1 ಮತ್ತು 2 ರವರಿಗೆ ಕಾಲಿನಿಂದ ಹೊದ್ದಿರುತ್ತಾರೆ ಎಂದರೆ ಸರಿಯಲ್ಲ. 1 ನೇ ಆರೋಪಿಯು ಚಾಸಾ 1 ರವರ ಬಲತೊಡೆಗೆ ಒದ್ದು ನೋವುಂಟು ಮಾಡಿರುತ್ತಾನೆ ಎಂದರೆ ಸರಿಯಲ್ಲ. ಚಾಸಾ3 ರವರು ಗಲಾಟೆ ಬಿಡಿಸಲು ಹೋದಾಗ ಆರೋಪಿಗಳು ಕೈಯಿಂದ ನನ್ನ ಮೈಕೈಗೆ ಹೊಡೆದಿರುತ್ತಾರೆ ಎಂದರೆ ಸರಿಯಲ್ಲ. ಆಗ ಚಾಸಾ 1 ರವರು ಕಿರುಚಿದಾಗ ಚಾಸಾ 5 ಮತ್ತು ನಾನು ಜಗಳ ಬಿಡಿಸಿರುತ್ತೇವೆ ಎಂದರೆ ಸರಿಯಲ್ಲ. ಈಗ ಓದಿ ಹೇಳಿದಂತೆ ಪೋಲೀಸರ ಮುಂದೆ ಹೇಳಿಕೆ ನೀಡಿರುತ್ತೇನೆ ಎಂದರೆ ಸರಿಯಲ್ಲ. ಹೇಳಿಕೆಯನ್ನು ನಿಪಿ 9

ಎಂದು ಗುರುತಿಸಲಾಯಿತು. ನಿಪಿ 9 ರಲ್ಲಿರುವ ಎಲ್ಲಾ ಸಂಗತಿಗಳು ಗೊತ್ತಿದ್ದರು ಆರೋಪಿಗೆ ಸಹಾಯ ಮಾಡಲು ಸುಳ್ಳು ಸಾಕ್ಷ್ಯನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

ಆರೋಪಿ ಪರ ವಕೀಲರು ಪಾಟೀ ಸವಾಲು ಇಲ್ಲ ಎಂದು ತಿಳಿಸಿರುತ್ತಾರೆ.

ಮರು ವಿಚಾರಣೆ : ಇಲ್ಲಾ.

(ನನ್ನ ಉಕ್ತ ಲೇಖನದಂತೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಿಸಲಾಯಿತು.)

ಓ ಹೇ ಕೇ ಸ ಇ ಒ.,

ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು
ಪ್ರ.ದ.ನ್ಯಾದಂ., ಚಾಮರಾಜನಗರ.